**ಕರ್ನಾಟಕ ಸರ್ಕಾರ**

ಸಂಖ್ಯೆ:ಕಂಇ 84 ಮುಅಬಿ 2020

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 21-09-2020

ಇಂದ,

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಂದಾಯ ಇಲಾಖೆ,
ಬೆಂಗಳೂರು.

ಇವರಿಗೆ,

ವ್ಯವಸ್ಥಾಪಕ ನಿರ್ದೇಶಕರು,
ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ,
14/3, ಅನೆಕ್ಸ್ ಬಿಲ್ಡಿಂಗ್, 3ನೇ ಮಹಡಿ,
ಶ್ರೀ ಅರವಿಂದ ಭವನ, ಮಿಥಿಕ್ ಸೊಸೈಟಿ ಆವರಣ,
ನೃಪತುಂಗ ರಸ್ತೆ, ಬೆಂಗಳೂರು-560 001.

ಮಾನ್ಯರೆ,

ವಿಷಯ:- ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯಿಂದ ಬ್ರಾಹ್ಮಣ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಪದವಿದರರಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ನಾಗರೀಕ ಸೇವಾ ಪರೀಕ್ಷೆಗಳನ್ನು ಎದುರಿಸಲು ಪರೀಕ್ಷಾ ಪೂರ್ವ ತರಬೇತಿ ನೀಡುವ ಕುರಿತು.

ಉಲ್ಲೇಖ:-
1. ಪತ್ರ ಸಂಖ್ಯೆ:ಕೆ.ಬಿ.ಡಿ.ಬಿ ಸಿಆರ್/30/2020-21, ದಿನಾಂಕ:09.09.2020.
2. ಪತ್ರ ಸಂಖ್ಯೆ:ಕೆ.ಬಿ.ಡಿ.ಬಿ ಸಿಆರ್/24/2020-21, ದಿನಾಂಕ:09.09.2020.

/ * /

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳ ಕಡೆ ಗಮನ ಸೆಳೆಯಲಾಗಿದೆ. ಸದರಿ ಪತ್ರಗಳಲ್ಲಿ ಕೋರಿರುವುದರನ್ವಯ ಪ್ರತಿ ವರ್ಷವು ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯಿಂದ ಬ್ರಾಹ್ಮಣ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪ್ರತಿ ಜಿಲ್ಲೆಯಲ್ಲಿ ಮೊದಲ 3 ಸ್ಥಾನಗಳಿಸಿದ ಬ್ರಾಹ್ಮಣ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರವಾಗಿ ನಗದು ಬಹುಮಾನ ನೀಡಲು ಹಾಗೂ ಪದವೀಧರರಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ನಾಗರೀಕ ಸೇವಾ ಪರೀಕ್ಷೆಗಳನ್ನು ಎದುರಿಸಲು ಇಚ್ಚಿಸುವ ಬ್ರಾಹ್ಮಣ ಸಮುದಾಯದ ಅಭ್ಯರ್ಥಿಗಳಿಗೆ ಚಾಣಾಕ್ಯ ಆಡಳಿತ ತರಬೇತಿ ಯೋಜನೆಯಡಿ ಪರೀಕ್ಷಾ ಪೂರ್ವ ತರಬೇತಿಯನ್ನು ನೀಡುವ ಯೋಜನೆಯನ್ನು ಜಾರಿಗೆ ತರಲು ಹಾಗೂ ಉಲ್ಲೇಖಿತ (1) ಮತ್ತು (2) ರ ಪತ್ರಗಳಲ್ಲಿ ಪ್ರಸ್ತಾಪಿಸುವ ಯೋಜನೆಗಳನ್ನು ಜಾರಿಗೆ ತರಲು ಅನುಮತಿ ನೀಡಲಾಗಿದೆ ಮತ್ತು ಈ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅವಶ್ಯವಿರುವ ಅನುದಾನವನ್ನು ಲೆಕ್ಕ ಶೀರ್ಷಿಕೆ 4059-80-051-0-55-(132) ಇದರಡಿಯಲ್ಲಿ ಲಭ್ಯವಿರುವ ಮೊತ್ತದಲ್ಲಿ ಭರಿಸಲು ಅನುಮತಿ ನೀಡಲಾಗಿದೆ ಎಂದು ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

ಕೆ. ಭಾನುಮತಿ 21/9

**(ಕೆ.ಭಾನುಮತಿ)**
ಸರ್ಕಾರದ ಜಂಟಿ ಕಾರ್ಯದರ್ಶಿ
ಕಂದಾಯ ಇಲಾಖೆ (ಭೂಮಿ, ಯುಪಿಓಆರ್ & ಮುಜರಾಯಿ)